# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಸುಭಾಸ ಮಾನಪ್ಪ ತಿಮ್ಮನಗೌಡರ್, ಗ್ರೇಡ್-1 ಕಾರ್ಯದರ್ಶಿ (ಪ್ರಭಾರ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ), ಕುಳಗೇರಿ ಕ್ರಾಸ್ (ಖಾನಾಪುರ ಎಸ್.ಕೆ) ಗ್ರಾಮ ಪಂಚಾಯಿತಿ, ಬಾದಾಮಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14(ಎ) ಅಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.

**ಓದಲಾಗಿದೆ:-** ನಿಬಂಧಕರು ಕರ್ನಾಟಕ ಲೋಕಾಯುಕ್ತ ಬೆಂಗಳೂರು, ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ: ಕಂಪ್ಲೇಂಟ್ / ಉಪಲೋಕ್ / ಬಿಜಿಎಂ / 1832 / 2021 / PO ARE-06 (Presenting Officer section), ದಿನಾಂಕ: 15.02.2022.

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಪತ್ರದ ಜೊತೆಯಲ್ಲಿ ಲಗತ್ತಿಸಿರುವ ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಸೆಕ್ಷನ್ 12(3) ರ ಅಡಿಯಲ್ಲಿ ಸಲ್ಲಿಸಿರುವ ದಿನಾಂಕ:07.02.2022 ರ ವರದಿಯಲ್ಲಿ ಈ ಕೆಳಗಿನಂತೆ ತಿಳಿಸಿರುತ್ತಾರೆ.

ಶ್ರೀ ಮಲ್ಲಿಕಾರ್ಜುನ ಹಣಮಂತಪ್ಪ ಹಿರಗಣ್ಣವರು, ಬಾದಾಮಿ ತಾಲ್ಲೂಕು, ಬಾಗಲಕೋಟೆ (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪಡುತ್ತಾರೆ) ರವರು ಶ್ರೀ ಸುಭಾಸ ಮಾನಪ್ಪ ತಿಮ್ಮನಗೌಡರ್, ಗ್ರೇಡ್-1 ಕಾರ್ಯದರ್ಶಿ (ಪ್ರಭಾರ ಪಂ.ಅ.ಅ), ಕುಳಗೇರಿ ಕ್ರಾಸ್ (ಖಾನಾಪುರ ಎಸ್.ಕೆ) ಗ್ರಾಮ ಪಂಚಾಯಿತಿ, ಬಾದಾಮಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ (ಇನ್ನು ಮುಂದೆ 'ಎದುರುದಾರರು' ಎಂದು ಕರೆಯಲ್ಪಡುತ್ತಾರೆ) ರವರ ವಿರುದ್ಧ ಲಂಚದ ಹಣಕ್ಕೆ ಬೇಡಿಕೆ ಇಟ್ಟಿದ ಆರೋಪಕ್ಕೆ ಸಂಬಂಧಿಸಿದಂತೆ ದೂರು ನೀಡಿದ್ದು, ಈ ದೂರಿಗೆ ಸಂಬಂಧಿಸಿದಂತೆ ಪೊಲೀಸ್ ನಿರೀಕ್ಷಕರು, ಭ್ರಷ್ಟಾಚಾರ ನಿಗ್ರಹ ದಳ, ಬಾಗಲಕೋಟೆ ಜಿಲ್ಲೆ ರವರು ತನಿಖೆ ನಡೆಸಿ ಸಲ್ಲಿಸಿರುವ ತನಿಖಾ ವರದಿರನ್ವಯ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಕಲಂ 7(2) ರನ್ವಯ ಸ್ವಯಂ ಪ್ರೇರಿತ ತನಿಖೆ ಕೈಗೊಂಡಿರುತ್ತಾರೆ.

**ದೂರಿನ ಸಂಕ್ಷಿಪ್ತ ವಿವರಣೆ:-**

ದೂರುದಾರರು ಬಾದಾಮಿ ತಾಲ್ಲೂಕಿನ ಖಾನಾಪುರ ಗ್ರಾಮದ ವಾಸಿಯಾಗಿದ್ದು, ಅವರ ತಂದೆಗೆ 7 ಜನ ಗಂಡುಮಕ್ಕಳಿದ್ದು, ದೂರುದಾರ ಮತ್ತು 5 ಜನ ಸಹೋದರರ ಹೆಸರಿನಲ್ಲಿ ಖಾನಾಪುರ ಎಸ್.ಕೆ (ಕುಳಗೇರಿ ಕ್ರಾಸ್) ಗ್ರಾಮದ ರಿ.ಸ.ನಂ 708/1ಎ/10ನೇ ರಲ್ಲಿ ಒಟ್ಟು 6 ಪಿತ್ರಾರ್ಜಿತ ನಿವೇಶನಗಳಿದ್ದು, ಸದರಿ ನಿವೇಶನಗಳ ಕಂಪ್ಯೂಟರ್ ಉತಾರೆಯನ್ನು ಮಾಡಿಕೊಡುವ ಸಂಬಂಧ ಒಂದು ಉತಾರೆಗೆ ರೂ. 10,000/- ರೂ ನಂತೆ ಒಟ್ಟು 60,000/ ಗಳ ಲಂಚದ ಹಣಕ್ಕೆ ಬೇಡಿಕೆ ಇಟ್ಟಿರುವ ಶ್ರೀ ಸುಭಾಸ ಮಾನಪ್ಪ ತಿಮ್ಮನಗೌಡರ್, ಗ್ರೇಡ್-1 ಕಾರ್ಯದರ್ಶಿ (ಪ್ರಭಾರ ಪಂ.ಅ.ಅ), ಕುಳಗೇರಿ ಕ್ರಾಸ್ (ಖಾನಾಪುರ ಎಸ್.ಕೆ) ಗ್ರಾಮ ಪಂಚಾಯಿತಿ, ಬಾದಾಮಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ ಇವರ ವಿರುದ್ಧ ಕ್ರಮ ಕೈಗೊಳ್ಳುವಂತೆ ದೂರುದಾರರು ಕೋರಿರುತ್ತಾರೆ.

ಸದರಿ ದೂರಿಗೆ ಸಂಬಂಧಿಸಿದಂತೆ ಪ್ರಕರಣವನ್ನು ದಾಖಲಿಸಿಕೊಂಡು ದಿನಾಂಕ: 11.04.2019 ರಂದು ಎದುರುದಾರರು ಕುಳಗೇರಿ ಬಸ್ ಸ್ಟ್ಯಾಂಡ್‌ನಲ್ಲಿ ದೂರುದಾರರಿಂದ ಲಂಚದ ಹಣವನ್ನು ಪಡೆದಿರುವುದು ಪೊಲೀಸ್ ನಿರೀಕ್ಷಕರು, ಭ್ರಷ್ಟಾಚಾರ ನಿಗ್ರಹ ದಳ, ಬಾಗಲಕೋಟೆ ಜಿಲ್ಲೆ ರವರು ಸಲ್ಲಿಸಿದ ತನಿಖಾ ವರದಿ ಮತ್ತು ಸಂಬಂಧಿಸಿದ ದಾಖಲೆಗಳಲ್ಲಿ ಎದುರುದಾರರ ಮೇಲಿನ ಆರೋಪವು ಮೇಲ್ನೋಟಕ್ಕೆ ಸಾಬೀತಾಗಿರುವುದು ಕಂಡುಬಂದಿರುತ್ತದೆ.

ಸದರಿ ಆರೋಪಕ್ಕೆ ಸಂಬಂಧಿಸಿದಂತೆ ಎದುರುದಾರರು ದಿನಾಂಕ: 12.10.2021 ರಂದು ಸಮಜಾಯಿಷಿಯನ್ನು ಸಲ್ಲಿಸಿದ್ದು, ಅವರ ಮೇಲಿನ ಆರೋಪವನ್ನು ಒಪ್ಪದೇ ಈ ಪ್ರಕರಣವನ್ನು ಕೈಬಿಡಬೇಕೆಂದು ಕೋರಿದ್ದು, ಎದುರುದಾರರು ನೀಡಿದ ಸಮಜಾಯಿಷಿಯು ಸಮಂಜಸವಾಗಿರುವುದಿಲ್ಲ. ಆದ್ದರಿಂದ ದೂರು ಅರ್ಜಿ, ಸಾಕ್ಷಿದಾರರ ಹೇಳಿಕೆಗಳು, ತನಿಖಾಧಿಕಾರಿ ಸಂಗ್ರಹಿಸಿದ ದಾಖಲೆಗಳು ಮತ್ತು ಎದುರುದಾರರು ನೀಡಿರುವ ಉತ್ತರಗಳನ್ನು ಕೂಲಂಕುಷವಾಗಿ ಪರಿಶೀಲಿಸಿದಾಗ ಸದರಿ ಎದುರುದಾರರು ತಮ್ಮ ವಿರುದ್ಧದ ನಡವಳಿಯನ್ನು ಕೈ ಬಿಡಲು ಸೂಕ್ತ / ಸಮಂಜಸ / ಸಮಾಧಾನಕಾರ ಕಾರಣ ತೋರಿಸಿಲ್ಲವೆಂದು ಅಭಿಪ್ರಾಯಕ್ಕೆ ಬರಲಾಗಿದೆ.

ಕಡತದಲ್ಲಿಯ ಸಂಗತಿಗಳು ಹಾಗೂ ದಾಖಲಾತಿಗಳಿಂದ ಎದುರುದಾರರು ಸರ್ಕಾರಿ / ಸಾರ್ವಜನಿಕ ನೌಕರರಾಗಿ ಪರಿಪೂರ್ಣ ಪ್ರಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠತೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡ ದುರ್ವರ್ತನೆ / ದುರ್ನಡತೆ ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ ಎದುರುದಾರರು ಕರ್ನಾಟಕ ನಾಗರೀಕ ಸೇವೆ (ನಡತೆ) ನಿಯಮ 1966 ರ ನಿಯಮಗಳು 3(1)(i) ರಿಂದ (iv) ರ ಅಡಿಯಲ್ಲಿ ದುರ್ನಡತೆ / ದುರ್ವತನೆ ಕಂಡುಬರುವುದರಿಂದ ಎದುರುದಾರರಾದ ಶ್ರೀ ಸುಭಾಸ ಮಾನಪ್ಪ ತಿಮ್ಮನಗೌಡರ್, ಗ್ರೇಡ್-1 ಕಾರ್ಯದರ್ಶಿ (ಪ್ರಭಾರ ಪಂ.ಅ.ಅ), ಕುಳಗೇರಿ ಕ್ರಾಸ್ (ಖಾನಾಪುರ ಎಸ್.ಕೆ) ಗ್ರಾಮ ಪಂಚಾಯಿತಿ, ಬಾದಾಮಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ ಇವರ ವಿರುದ್ಧ ಶಿಸ್ತು ಕ್ರಮ ಜರುಗಿಸಲು ಹಾಗೂ ಕರ್ನಾಟಕ ನಾಗರೀಕ ಸೇವೆ ನಿಯಮ 1957 ರ ನಿಯಮ 14-ಎ ರ ಅಡಿಯಲ್ಲಿ ಇಲಾಖಾ ವಿಚಾರಣೆಯನ್ನು ನಡೆಸಲು ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸಬೇಕೆಂದು ಪ್ರಸ್ತಾವನೆಯಲ್ಲಿ ಕೋರಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ಪ್ರಸ್ತಾವನೆಯನ್ನು ಪರಿಶೀಲಿಸಿದೆ. ಸದರಿ ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಸದರಿ ಪ್ರಕರಣದಲ್ಲಿನ ಶ್ರೀ ಸುಭಾಸ ಮಾನಪ್ಪ ತಿಮ್ಮನಗೌಡರ್, ಗ್ರೇಡ್-1 ಕಾರ್ಯದರ್ಶಿ (ಪ್ರಭಾರ ಪಂ.ಅ.ಅ), ಕುಳಗೇರಿ ಕ್ರಾಸ್ (ಖಾನಾಪುರ ಎಸ್.ಕೆ) ಗ್ರಾಮ ಪಂಚಾಯಿತಿ, ಬಾದಾಮಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ ಇವರ ವಿರುದ್ಧದ ಲಂಚ ಸ್ವೀಕರಿಸಿದ ಆರೋಪಕ್ಕೆ ಸಂಬಂಧಿಸಿದಂತೆ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14(ಎ) ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/35/ಗ್ರಾಪಂಕಾ/2022, ಬೆಂಗಳೂರು,**

**ದಿನಾಂಕ: 04.04.2022**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ಸುಭಾಸ ಮಾನಪ್ಪ ತಿಮ್ಮನಗೌಡರ್, ಗ್ರೇಡ್-1 ಕಾರ್ಯದರ್ಶಿ (ಪ್ರಭಾರ ಪಂ.ಅ.ಅ), ಕುಳಗೇರಿ ಕ್ರಾಸ್ (ಖಾನಾಪುರ ಎಸ್.ಕೆ) ಗ್ರಾಮ ಪಂಚಾಯಿತಿ, ಬಾದಾಮಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ ಇವರ ವಿರುದ್ಧದ ಲಂಚ ಸ್ವೀಕರಿಸಿದ ಆರೋಪದ ಬಗ್ಗೆ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14(ಎ)ರಡಿ ಈ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರವರಿಗೆ ವಹಿಸಿ ಆದೇಶಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು ಆಪಾದಿತರಿಗೆ ನಿಯಮಾನುಸಾರ ಸೂಕ್ತ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

4/4/22

**(ರಾಜು ಎಂ.ಎಂ)**
ಸರ್ಕಾರದ ಅಧೀನ ಕಾರ್ಯದರ್ಶಿ (ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1. ಮಹಾಲೇಖಪಾಲರು, ಬೆಂಗಳೂರು, ಕರ್ನಾಟಕ.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. **(ಪುಟ: 01 ರಿಂದ 166 ರವರೆಗೆ ದಾಖಲೆಗಳನ್ನು ಇದರೊಂದಿಗೆ ಲಗತ್ತಿಸಿ ಹಿಂದಿರುಗಿಸಿದೆ).**
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬಾಗಲಕೋಟೆ ಜಿಲ್ಲೆ.

5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಬಾದಾಮಿ, ಬಾಗಲಕೋಟೆ ಜಿಲ್ಲೆ. ಶ್ರೀ ಸುಭಾಸ ಮಾನಪ್ಪ ತಿಮ್ಮನಗೌಡರ್, ಗ್ರೇಡ್ ಕಾರ್ಯದರ್ಶಿ (ಪ್ರಭಾರ ಪಂ.ಅ.ಅ), ಕುಳಗೇರಿ ಕ್ರಾಸ್ (ಖಾನಾಪುರ ಎಸ್.ಕೆ) ಗ್ರಾಮ ಪಂಚಾಯಿತಿ, ಬಾದಾಮಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ. **(ಇವರಿಗೆ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಬಾದಾಮಿ, ಬಾಗಲಕೋಟೆ ಜಿಲ್ಲೆ ಇವರ ಮುಖಾಂತರ)**
6. ಗಣಕ ಕೋಶ.ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.